ಕರ್ನಾಟಕ ಪರೀಕ್ಷಾ ಪ್ರಾಧಿಕಾರ
KARNATAKA EXAMINATIONS AUTHORITY

## ಅಧಿಸೂಚನೆ

ಸಂಖ್ಯೆ: ED/KEA/ADMN/CR-06/2015-16 ದಿನಾಂಕ : 10.08.2017

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳಿಗೆ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ 28.07.2017 ರಂದು ಪ್ರಕಟಿಸಿ, ಸದರಿ ಅಭ್ಯರ್ಥಿಗಳನ್ನು ದಿನಾಂಕ 16.08.2017ರಿಂದ 19.08.2017ರವರೆಗೆ ಪರಿಶೀಲನೆಗೆ ಹಾಜರಾಗುವಂತೆ ಸೂಚಿಸಲಾಗಿತ್ತು.

ಆದರೆ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ: 2805-2815/2017ರಲ್ಲಿ ಮಾನ್ಯ ನ್ಯಾಯಮಂಡಳಿಯು ದಿನಾಂಕ 31.07.2017 ರಂದು ಮಧ್ಯಂತರ ಆದೇಶ ನೀಡಲಾಗಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳ ನೇಮಕಾತಿಯ ಯಥಾಸ್ಥಿತಿ ಕಾಪಾಡುವಂತೆ ಆದೇಶಿಸಿದೆ. ಈ ಹಿನ್ನಲೆಯಲ್ಲಿ ಅಭ್ಯರ್ಥಿಗಳಿಗೆ ಈಗಾಗಲೆ ಸೂಚಿಸಿದಂತೆ ದಿನಾಂಕ 16.08.2017ರಿಂದ 19.08.2017ರವರೆಗೆ ನಡೆಸಲು ಉದ್ದೇಶಿಸಿದ ದಾಖಲೆಗಳ ಪರಿಶೀಲನೆಯನ್ನು ಮುಂದಿನ ಆದೇಶದವರೆಗೆ ಮುಂದೂಡಲಾಗಿದೆ.

ಸಹಿ/-

ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.**
18th Cross, Sampige Road, Malleshwaram, Bangalore – 560 012.
Phone: 080-2356 4583, 2336 1786, Fax: 080-2346 1576
Website : http://kea.kar.nic.in e-mail : keauthority-ka@nic.in